KARNATAKA
SUCCESS NO 1
Kannada Daily

ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-114
ಮಂಗಳವಾರ 04 ಮಾರ್ಚ್ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ತುಮಕೂರಿನ ಸಿದ್ದಗಂಗಾ ಮಠದ ಕಲ್ಯಾಣಿಯಲ್ಲಿ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ತೆಪ್ಪೋತ್ಸವ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

## ರಾಗಿ ಖರೀದಿ ಕೇಂದ್ರಕ್ಕೆ ಡೀಸಿ ಭೇಟಿ: ರೈತರಿಗೆ ನೆರಳಿನ ವ್ಯವಸ್ಥೆ ಮಾಡಲು ಸೂಚನೆ



ತುಮಕೂರು: ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ತುಮಕೂರು ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ತೆರೆದಿರುವ ರಾಗಿ ಖರೀದಿ ಕೇಂದ್ರಕ್ಕೆ ಸೋಮವಾರ ಭೇಟಿ ನೀಡಿ ಪರಿಶೀಲಿಸಿದರು.

ನಂತರ ಮಾತನಾಡಿದ ಅವರು, ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿಗಾಗಿ ಪ್ರಾರಂಭಿಸಿರುವ ನೋಂದಣಿ ಕೇಂದ್ರದಲ್ಲಿ ನೋಂದಣಿಗಾಗಿ ಬಿಸಿಲಿನಲ್ಲಿಯೇ ಸಾಲುಗಟ್ಟಿ ನಿಂತಿದ್ದ ರೈತರಿಗೆ ಕೂಡಲೇ ನೆರಳಿನ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ಸ್ಥಳದಲ್ಲಿಯೇ ಕೃಷಿ ಉತ್ಪನ್ನ ಮಾರುಕಟ್ಟೆ ಉಪನಿರ್ದೇಶಕ ರಾಜಣ್ಣ ಹಾಗೂ ಖರೀದಿ ಅಧಿಕಾರಿ ರುದ್ರಪ್ಪ ಅವರಿಗೆ ಸೂಚನೆ ನೀಡಿದರು.

ರಾಗಿ ಖರೀದಿಗಾಗಿ ತೆರೆದಿರುವ ನೋಂದಣಿ ಕೇಂದ್ರದಲ್ಲಿ ನೋಂದಣಿಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಆಗಮಿಸುತ್ತಿರುವುದರಿಂದ ಖರೀದಿ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಹೆಚ್ಚುವರಿ ಅಧಿಕಾರಿಗಳನ್ನು ನಿಯೋಜಿಸಬೇಕು. ರೈತರನ್ನು ಕಾಯಿಸದೆ ನೋಂದಣಿ ಕಾರ್ಯವನ್ನು ಚುರುಕುಗೊಳಿಸಬೇಕು. ಸರ್ಕಾರ ನಿಗಧಿಪಡಿಸಿದ ಮಾನದಂಡಗಳನ್ವಯ ರಾಗಿಯನ್ನು ಖರೀದಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಮಂಟೇಸ್ವಾಮಿ ಮಾತನಾಡಿ, ಸರ್ಕಾರವು ಕನಿಷ್ಠ ಬೆಂಬಲಬೆಲೆ ಯೋಜನೆಯಡಿ ಪ್ರತಿ ಕ್ವಿಂಟಾಲ್ ರಾಗಿ ಖರೀದಿ ದರವನ್ನು 4,290 ರೂ.ಗಳಿಗೆ ನಿಗಧಿಪಡಿಸಿದೆ. ರೈತರಿಂದ ನೇರವಾಗಿ ರಾಗಿ ಖರೀದಿಸಲು ಈಗಾಗಲೇ ಜಿಲ್ಲೆಯಲ್ಲಿ 10 ರಾಗಿ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಖರೀದಿಗಾಗಿ ಈವರೆಗೂ 51,000 ರೈತರು 7,61,000 ಕ್ವಿಂಟಾಲ್ ರಾಗಿಯನ್ನು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ರಾಗಿಯಲ್ಲಿರುವ ತೇವಾಂಶ ಪ್ರಮಾಣವನ್ನು ಪರಿಶೀಲಿಸುವ ಪ್ರಕ್ರಿಯೆಯನ್ನು ಜಿಲ್ಲಾಧಿಕಾರಿಗಳು ವೀಕ್ಷಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ವ್ಯವಸ್ಥಾಪಕ ಶ್ರೀಧರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಏ. 7, 8ರಂದು ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ: ಸಕಲ ಸಿದ್ಧತೆಗೆ ಜಿಲ್ಲಾಧಿಕಾರಿ ಸೂಚನೆ

ತುಮಕೂರು: ಜಿಲ್ಲೆಯಲ್ಲಿ ಏಪ್ರಿಲ್ 7, 8ರಂದು ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ನಡೆಯಲಿದ್ದು, ಕ್ರೀಡಾಕೂಟ ನಡೆಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ ನೀಡಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ನ್ಯಾಯಾಲಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲ ನೌಕರರು ಕ್ರೀಡಾಕೂಟದಲ್ಲಿ ತಪ್ಪದೆ ಭಾಗವಹಿಸಬೇಕು. ಕ್ರೀಡಾಕೂಟ ಜರುಗಲಿರುವ 2 ದಿನಗಳಂದು ನೌಕರರಿಗೆ ವಸತಿ, ಊಟದ ವ್ಯವಸ್ಥೆ ಮಾಡಬೇಕು ಎಂದು ನಿರ್ದೇಶನ



ನೀಡಿದರು.

ಮುನ್ನೆಚ್ಚರಿಕಾ ಕ್ರಮವಾಗಿ ತುರ್ತು ಚಿಕಿತ್ಸಾ ವಾಹನ, ಪ್ರಥಮ ಚಿಕಿತ್ಸಾ ಘಟಕ, ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಸೂಚನೆ ನೀಡಿದರು.

ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಎನ್. ನರಸಿಂಹರಾಜು ಮಾತನಾಡಿ, ಕ್ರೀಡಾಕೂಟದಲ್ಲಿ ಭಾಗವಹಿಸಲಿಚ್ಛಿಸುವವರು ತಮ್ಮ ಹೆಸರನ್ನು ಆನ್‌ಲೈನ್ ಮುಖಾಂತರ ನೋಂದಣಿ ಮಾಡಿಕೊಳ್ಳಬೇಕು. ಕ್ರೀಡಾಕೂಟಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ: ರಮೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಚಂದ್ರಶೇಖರ್, ಜಿಲ್ಲಾ ಶಸ್ತ್ರಚಿಕಿತ್ಸಕ ಅಸ್ಗರ್ ಬೇಗ್, ಹಿಂದುಳಿದ ವರ್ಗಗಳ ಅಭಿವೃದ್ಧಿ ಅಧಿಕಾರಿ ಸೋನಿಯಾ ವರ್ಣೇಕರ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣಪ್ಪ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಂಟೇಸ್ವಾಮಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ರೋಹಿತ್ ಗಂಗಾಧರ್, ಮತ್ತಿತರ ಅಧಿಕಾರಿಗಳು ಇದ್ದರು.

## ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಲು ಡೀಸಿ ಸೂಚನೆ

ತುಮಕೂರು : ಪ್ರತಿ ದಿನ ವಿವಿಧ ಕೆಲಸಗಳ ನಿಮಿತ್ತ ಜಿಲ್ಲಾಧಿಕಾರಿಗಳ ಕಚೇರಿಗೆ ಭೇಟಿ ನೀಡುವ ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸುವಂತೆ ಅಧಿಕಾರಿ/ಸಿಬ್ಬಂದಿಗಳಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ವಿವಿಧ ಶಾಖೆಗಳಿಗೆ ಕಚೇರಿ ವೇಳೆಯಲ್ಲಿ ಸೋಮವಾರ ಬೆಳಿಗ್ಗೆ ಭೇಟಿ ನೀಡಿ ಅಧಿಕಾರಿ/ಸಿಬ್ಬಂದಿಗಳ ಕಾರ್ಯನಿರ್ವಹಣೆಯನ್ನು ಪರಿಶೀಲಿಸಿದ ಅವರು, ಸಮಸ್ಯೆಗಳನ್ನು ಹೊತ್ತು ಬರುವ ಸಾರ್ವಜನಿಕರನ್ನು ಸಮಾಧಾನದಿಂದ ಮಾತನಾಡಿಸಿ ಸ್ಪಂದಿಸಬೇಕು. ತಕ್ಷಣವೇ ಪರಿಹಾರ ಕೊಡಿಸಲು ಸಾಧ್ಯವಾಗದಿದ್ದ ಪಕ್ಷದಲ್ಲಿ ಮುಂದಿನ ದಿನಗಳಲ್ಲಿ ಕ್ರಮವಹಿಸಬೇಕೆಂದು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನೌಕರಿ ಮಾಡುವ ಅವಕಾಶ ಎಲ್ಲರಿಗೂ ದೊರೆಯುವುದಿಲ್ಲ. ಜನರ ಸೇವೆ ಮಾಡುವ ಅವಕಾಶವನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು. ಸಿಬ್ಬಂದಿಗಳು ಸಕಾಲದಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡದೇ ಹೋದರೆ ಅದರ ಪರಿಣಾಮ ಜಿಲ್ಲಾಡಳಿತದ ಮೇಲೆ ಬೀರುತ್ತದೆ. ಈ ನಿಟ್ಟಿನಲ್ಲಿ ದೂರದ ಊರಿನಿಂದ ಬರುವ ರೈತರು/ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸುವ ಗುಣ ಬೆಳೆಸಿಕೊಳ್ಳಬೇಕೆಂದು ಸಿಬ್ಬಂದಿಗಳಿಗೆ ನಿರ್ದೇಶಿಸಿದರು.

## ಮಹಾನಗರ ಪಾಲಿಕೆ ಮುಂಭಾಗ ವಾಟರ್‌ಮನ್‌ಗಳಿಂದ ಅನಿರ್ದಿಷ್ಟಾವಧಿ ಮುಷ್ಕರ ಆರಂಭ ಪಾಲಿಕೆಯಲ್ಲಿ ಗುತ್ತಿಗೆ ಪದ್ಧತಿಗೆ ವಿರೋಧ; ನೇರ ನೇಮಕಾತಿಗೆ ಆಗ್ರಹ



ತುಮಕೂರು: ಮಹಾನಗರ ಪಾಲಿಕೆಯಲ್ಲಿ ಗುತ್ತಿಗೆ ಪದ್ಧತಿ ರದ್ದುಪಡಿಸಿ ನೇರ ನೇಮಕಾತಿ, ಸಮಾನ ಕೆಲಸಕ್ಕೆ ಸಮಾನ ವೇತನ, ಖಾಲಿ ಹುದ್ದೆ ಭರ್ತಿ, ಗೃಹ ಭಾಗ್ಯ ಯೋಜನೆ ಕಲ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಜಿಲ್ಲಾ ನೀರು ಸರಬರಾಜು ನೌಕರರ ಸಂಘದ ವತಿಯಿಂದ ನಗರದ ಮಹಾನಗರ ಪಾಲಿಕೆ ಕಚೇರಿ ಆವರಣದಲ್ಲಿ ಇಂದಿನಿಂದ ಅನಿರ್ದಿಷ್ಟಾವಧಿ ಮುಷ್ಕರ ಕೈಗೊಳ್ಳಲಾಗಿದೆ.

ಬಿರು ಬೇಸಿಗೆಯ ಝಳ ನೆತ್ತಿ ಸುಡುತ್ತಿದ್ದು, ಕುಡಿಯುವ ನೀರಿಗೆ ಹಾಹಾಕಾರ ಉಂಟಾಗುವ ಮುನ್ಸೂಚನೆಗಳು ಕಂಡು ಬರುತ್ತಿರುವ ಬೆನ್ನಲ್ಲೆ ಮಹಾನಗರ ಪಾಲಿಕೆಯ ವಾಲ್‌ಮನ್‌ಗಳ ಇಂದಿನಿಂದ ಮುಷ್ಕರ ನಡೆಸುತ್ತಿರುವುದು ನಗರದ ನಾಗರಿಕರಿಗೆ ನುಂಗಲಾರದ ತುತ್ತಾಗಿ ಪರಿಣಮಿಸಿದೆ.

ಮಹಾನಗರ ಪಾಲಿಕೆಯಲ್ಲಿ 210 ಜನ ವಾಲ್‌ಮನ್‌ಗಳು ನೀರು ಸರಬರಾಜು ನಿರ್ವಹಣೆ ಮಾಡಿಕೊಂಡು ಬರುತ್ತಿದ್ದು, ಇದರೊಂದಿಗೆ ಬುಗುಡನಹಳ್ಳಿ ಕೆರೆ ಮತ್ತು ಪಿ.ಎನ್.ಆರ್.ಪಾಳ್ಯ ಕೆರೆ ಸ್ವಚ್ಛಗೊಳಿಸುವುದು, ಪಿಐಡಿ ನಂಬರ್‌ಗಳನ್ನು ಪ್ರತಿ ಮನೆ ಮನೆಗೂ ಬರೆಯುವುದು ಕಂದಾಯ ವಸೂಲಾತಿ ಮಾಡುವುದು, ಚುನಾವಣಾ ಕಾರ್ಯಕ್ಕೆ ಬಳಸಿಕೊಳ್ಳುವುದು, ಬಿಎಲ್‌ಓ ಕೆಲಸ ನಿರ್ವಹಿಸುವುದು ಸೇರಿದಂತೆ ಇತರೆ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದೇವೆ. ಆದರೂ ನಮ್ಮ ಸೇವೆಯನ್ನು ಖಾಯಂಗೊಳಿಸುತ್ತಿಲ್ಲ ಎಂದು ಮುಷ್ಕರ ನಿರತ ವಾಲ್‌ಮನ್‌ಗಳು ಆಕ್ರೋಶ ಹೊರ ಹಾಕಿದರು.

ಜಿಲ್ಲಾ ನೀರು ಸರಬರಾಜು ನೌಕರರ ಸಂಘದ ಅಧ್ಯಕ್ಷ ಕುಮಾರ್ ಮಾತನಾಡಿ, ಮಹಾನಗರ ಪಾಲಿಕೆಯಲ್ಲಿ ಕಳೆದ 25 ವರ್ಷಗಳಿಂದ ನಿರಂತರವಾಗಿ ನಾಗರಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೀರು ಸರಬರಾಜು ಮಾಡಿಕೊಂಡು ಬರುತ್ತಿದ್ದೇವೆ. 210 ಜನ ನೌಕರರು ಪಂಪ್‌ಹೌಸ್, ವಾಟರ್‌ಮನ್ ಕೆಲಸ ಮಾಡಿಕೊಂಡು ಬರುತ್ತಿದ್ದೇವೆ. ಹಾಗಾಗಿ 210 ಜನರ ಸೇವೆಯನ್ನು ಖಾಯಮಾತಿ ಮಾಡಬೇಕು. ನೇರ ನೇಮಕಾತಿ, ನೇರ ಪಾವತಿ ಮಾಡಬೇಕು. ವಿಶೇಷ ನೇಮಕಾತಿ ಮಾಡಬೇಕು. ಪಾಲಿಕೆಯಲ್ಲಿ ಖಾಲಿ ಇರುವ 110 ನೌಕರರ ಹುದ್ದೆಗೆ ಹಾಲಿ ಕೆಲಸ ಮಾಡುತ್ತಿರುವ ನೌಕರರನ್ನೇ ಭರ್ತಿ ಮಾಡಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಕಾರ್ಮಿಕರ ಸಹಕಾರ ಸಂಘ ಪ್ರಾರಂಭಿಸಲು ನಮ್ಮ ವಿರೋಧವಿದೆ. ಇದನ್ನು ಕೈಬಿಟ್ಟು ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು. ವಾಲ್ ಮನ್ ನೌಕರರಿಗೆ ಗೃಹ ಭಾಗ್ಯ ನೀಡಬೇಕು. ಕಾರ್ಮಿಕರ ಪಿಎಫ್ ಖಾತೆ ಬಾಕಿ ಇರುವ 55 ಲಕ್ಷ ರೂ.ಗಳನ್ನು ತುರ್ತಾಗಿ ಜಮಾ ಮಾಡಬೇಕು ಎಂದು ಆಗ್ರಹಿಸಿದರು.

ಹೈಕೋರ್ಟ್ ಆದೇಶವಿದ್ದರೂ ನೇಮಕಾತಿ ಮಾಡಿಕೊಂಡಿಲ್ಲ. ಆದ್ದರಿಂದ ಉಚ್ಚ ನ್ಯಾಯಾಲಯದ ಆದೇಶದಂತೆ ತುರ್ತಾಗಿ ನಮ್ಮ ಸೇವೆಯನ್ನು ಖಾಯಂ ಮಾಡುವುದು ಸೇರಿದಂತೆ ಇನ್ನಿತರೆ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಹೋರಾಟ ನಡೆಸುತ್ತಿದ್ದೇವೆ ಎಂದ ಅವರು, ನಮ್ಮ ಹೋರಾಟದ ಸ್ಥಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಆಗಮಿಸಿ ನಮ್ಮ ಸಮಸ್ಯೆಯನ್ನು ಆಲಿಸುವುದರ ಜತೆಗೆ ಈ ಬಜೆಟ್‌ನಲ್ಲಿ ನೇರ ನೇಮಕಾತಿ, ನೇರ ಪಾವತಿಯ ಘೋಷಣೆ ಮಾಡುವ ಭರವಸೆ ನೀಡಬೇಕು ಎಂದರು.

ಕೋರ್ಟ್ ಆದೇಶ ಮಾಡಿದ್ದರೂ ನಮ್ಮ ಸೇವೆಯನ್ನು ಖಾಯಂ ಮಾಡಿಲ್ಲ. ಹಾಗಾಗಿ ನಮ್ಮ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಹೋರಾಟ ಮಾಡುತ್ತಿದ್ದೇವೆ. ನಮ್ಮ ಬೇಡಿಕೆ ಈಡೇರುವವರೆಗೂ ಹಗಲು–ರಾತ್ರಿ ಎನ್ನದೆ ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತೇವೆ. ಇಂದಿನಿಂದ ನೀರು ಸರಬರಾಜು ಸ್ಥಗಿತಗೊಳಿಸಿದ್ದೇವೆ. ನಗರದ ನಾಗರಿಕರು ನಮ್ಮ ಹೋರಾಟಕ್ಕೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಮುಷ್ಕರದಲ್ಲಿ ಸಂಘದ ಉಪಾಧ್ಯಕ್ಷ ನಟರಾಜು, ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಖಜಾಂಚಿ ಚಂದ್ರಯ್ಯ, ನಂದೀಶ್, ಮಂಜುನಾಥ್, ರಮೇಶ್ ಸೇರಿದಂತೆ ಎಲ್ಲ ವಾಟರ್‌ಮನ್‌ಗಳು ಭಾಗವಹಿಸಿದ್ದಾರೆ.

## ‘ಸಿವಿಲ್ ಇಂಜಿನಿಯರ್‌ಗಳು ತಂತ್ರಜ್ಞಾನದ ಸಮರ್ಪಕ ಬಳಕೆ ಮಾಡಿ’



ತುಮಕೂರು: ಸಿವಿಲ್ ಇಂಜಿನಿಯರ್‌ಗಳಿಲ್ಲದೆ ನಮ್ಮ ಸಮಾಜ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ. ರಸ್ತೆಗಳು, ಕಟ್ಟಡಗಳು, ಸೇತುವೆಗಳು ಮತ್ತು ಒಳಚರಂಡಿ ವ್ಯವಸ್ಥೆಗಳಿಂದ ಹಿಡಿದು ನಮ್ಮ ಸುತ್ತಲಿರುವ ಎಲ್ಲವನ್ನೂ ಸಿವಿಲ್ ಎಂಜಿನಿಯರ್‌ಗಳು ಪರಿಣಿತವಾಗಿ ವಿನ್ಯಾಸಗೊಳಿಸಿದ್ದಾರೆ ಮತ್ತು ರಚಿಸಿದ್ದಾರೆ. ಅವು ಸಮಾಜದ ಮೇಲೆ ನೇರ ಪರಿಣಾಮ ಬೀರುತ್ತವೆ. ಆದರೆ ಆಧುನಿಕ ಕಾಲಘಟ್ಟದಲ್ಲಿ ಈ ಮೂಲ ಸೌಕರ್ಯಗಳಿಲ್ಲದೆ ಜಗತ್ತು ತನ್ನ ದೈನಂದಿನ ಜೀವನವನ್ನು ನಡೆಸಲು ಸಾಧ್ಯವಿಲ್ಲವಾದ್ದರಿಂದ ಸಿವಿಲ್ ಇಂಜಿನಿಯರ್‌ಗಳು ತಂತ್ರಜ್ಞಾನದ ಸಮರ್ಪಕ ಬಳಕೆ ಮಾಡುವ ಮೂಲಕ ಜನಸಾಂಆನ್ಯರಿಗೆ ಮೂಲಸೌಲಭ್ಯಗಳ ದೊರಕುವಂತೆ ಮಾಡಬೇಕಾಗಿದೆ ಎಂದು ಲೋಕೋಪಯೋಗಿ ಇಲಾಖೆ ನಿವೃತ್ತ ಕಾರ್ಯನಿರ್ವಾಹಕ ಇಂಜಿನಿಯರ್ ಎಚ್.ಬಿ. ಮಲ್ಲೇಶ್ ಅವರು ಅಭಿಪ್ರಾಯಪಟ್ಟರು.

ನಗರದ ಸಮೀಪದ ಕ್ಯಾತಸಂದ್ರ ಟೋಲ್ ಬಳಿಯಿರುವ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಎಂಜಿನಿಯರಿಂಗ್ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದ "ನಿರ್ಮಾಣ(ಕನ್ಸ್ಟ್ರಕ್ಟ್)" ಫೋರಮ್ ಉದ್ಘಾಟನೆ ಮಾಡಿ, ನಂತರ ವಿಶ್ವೇಶ್ವರಯ್ಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮಾತನಾಡಿದ ಅವರು, ಸಿವಿಲ್ ಎಂಜಿನಿಯರಿಂಗ್ ವಿಭಾಗದಿಂದ ಸಾರಿಗೆ, ವಸತಿ ಮತ್ತು ಇಂಧನ ಶಕ್ತಿ ಸೇರಿದಂತೆ ಸಮಾಜದ ಅಗತ್ಯತೆಯ ಮೂಲಸೌಕರ್ಯವನ್ನು ಸಮಾಜಕ್ಕೆ ಪೂರೈಸುತ್ತದೆ. ಅಲ್ಲದೆ ಸುರಕ್ಷಿತ, ಪರಿಣಾಮಕಾರಿ ಮತ್ತು ಸಮರ್ಥನೀಯ ರಚನೆಗಳನ್ನು ವಿನ್ಯಾಸಗೊಳಿಸಲು ಮತ್ತು ನಿರ್ವಹಿಸಲು ವೈಜ್ಞಾನಿಕ ತತ್ವಗಳನ್ನು ಬಳಸುತ್ತಾರೆ ಎಂದು ಸಿವಿಲ್ ಎಂಜಿನಿಯರ್‌ಗಳು ಪಾತ್ರವನ್ನು ವಿವರಿಸಿದರು.

ತಾಂತ್ರಿಕ ಮತ್ತು ವಿಶ್ಲೇ?ಣಾತ್ಮಕ ಕೌಶಲ್ಯಗಳ ಅವಶ್ಯಕತೆಯ ಜೊತೆಗೆ, ಸಿವಿಲ್ ಎಂಜಿನಿಯರ್ ಪಾತ್ರಕ್ಕೆ ಸೃಜನಶೀಲತೆಯ ಮಟ್ಟವೂ ಅಗತ್ಯವಾಗಿರುತ್ತದೆ. ಈ ಪದವಿಗಾಗಿ ಅಧ್ಯಯನ ಮಾಡುವಾಗ ಪ್ರಾಯೋಗಿಕ ಪರಿಹಾರಗಳೊಂದಿಗೆ ಬರಲು ನವೀನ ಚಿಂತನೆಯನ್ನು ಅಭಿವೃದ್ಧಿಪಡಿಸುತ್ತೀರಿ ಮತ್ತು ಕಲಾತ್ಮಕವಾಗಿ ಮತ್ತು ಕ್ರಿಯಾತ್ಮಕ ರಚನೆಗಳನ್ನು ಹೇಗೆ ವಿನ್ಯಾಸಗೊಳಿಸಬೇಕೆಂದು ಕಲಿಯುತ್ತೀರಿ. ಈ ಕಲಿಕೆ ಸಮಾಜದ ಅಭಿವೃದ್ಧಿಗೆ ಪೂರಕವಾಗಿರಲಿ. ಮುಂದಿನ ದಿನಗಳಲ್ಲಿ ಸಮಾಜ ಮತ್ತು ಮಾರುಕಟ್ಟೆಯಲ್ಲಿ ಸಿವಿಲ್ ಎಂಜಿನಿಯರ್‌ಗಳಿಗೆ ಹೆಚ್ಚಿನ ಬೇಡಿಕೆ ಬರಲಿದೆ ಎಂದು ಎಚ್.ಬಿ. ಮಲ್ಲೇಶ್ ಅವರು ಅಭಿಪ್ರಾಯಪಟ್ಟರು.

ಪ್ರಾಂಶುಪಾಲರಾದ ಡಾ. ಎಲ್. ಸಂಜೀವ್ ಕುಮಾರ್ ಅವರು ಮಾತನಾಡಿ, ಕಾಲೇಜಿನಲ್ಲಿ "ನಿರ್ಮಾಣ" ವೇದಿಕೆಯ ಚಟುವಟಿಕೆಗಳ ಅಗತ್ಯವನ್ನು ಒತ್ತಿ ಹೇಳಿದಲ್ಲದೆ, ವಿಭಾಗದ ತಾಂತ್ರಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ವಿದ್ಯಾರ್ಥಿಗಳಿಗೆ ಸೂಚನೆ ನೀಡಿದರು.

2024–25 ಚಟುವಟಿಕೆಗಳ ಕುರಿತು ವಿಭಾಗದ ಸುದ್ದಿಪತ್ರವನ್ನು ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ. ವಿಜಯ್ ಬಿ.ಜಿ. ಅನಾವರಣಗೊಳಿಸಿದರು. ತರಗತಿಯ ಅಗ್ರಶ್ರೇಯಾಂಕಿತರಿಗೆ ಪದಕಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ "ನಿರ್ಮಾಣ(ಕನ್ಸ್ಟ್ರಕ್ಟ್)' ವೇದಿಕೆಯ ಸಂಯೋಜಕಿ ಶ್ರೀನಿಧಿ, ಹಿರಿಯ ಪ್ರಾಧ್ಯಾಪಕ ಡಾ.ಶಿವಕುಮಾರ್, ತರಬೇತಿ ಮತ್ತು ನಿಯೋಜನೆ ಅಧಿಕಾರಿ ರಾಜೇಶ್, ಸಿವಿಲ್ ಇಂಜಿನಿಯರಿಂಗ್ ವಿಭಾಗದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು. ಸಿವಿಲ್ ಎಂಜಿನಿಯರಿಂಗ್ ವಿಭಾಗದ ಭೋಧಕರಾದ ಬಸವಪ್ರಭು ಅವರು ಪ್ರಾರ್ಥಿಸಿದರು.

## ಚಿಕ್ಕನಾಯಕನಹಳ್ಳಿ ತಾಲೂಕಿನಿಂದ ನಿತ್ಯ 70 ಸಾವಿರ ಲೀ. ಹಾಲು ಸಂಗ್ರಹ

ಹುಳಿಯಾರು: ತುಮಕೂರು ಹಾಲು ಒಕ್ಕೂಟಕ್ಕೆ ಚಿಕ್ಕನಾಯಕನಹಳ್ಳಿ ತಾಲೂಕಿನಿಂದ ನಿತ್ಯ 60 ರಿಂದ 70 ಸಾವಿರ ಲೀಟರ್ ಹಾಲನ್ನು ಹಾಕುತ್ತಿದೆ. ಅಲ್ಲದೇ ಜಿಲ್ಲೆಯಲ್ಲಿಯೇ ಶುದ್ಧ ಹಾಲಿನ ಉತ್ಪಾದನೆಯಲ್ಲಿ ತಾಲ್ಲೂಕು ಮುಂಚೂಣಿಯಲ್ಲಿ ಇದೆ ಎಂದು ತುಮಕೂರು ಹಾಲು ಒಕ್ಕೂಟದ ಚಿಕ್ಕನಾಯಕನಹಳ್ಳಿ ನಿರ್ದೇಶಕ ಬಿ.ಎನ್.ಶಿವಪ್ರಕಾಶ್ ತಿಳಿಸಿದರು.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಚಿಕ್ಕನಾಯಕನಹಳ್ಳಿ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘ ಕುಪ್ಪೂರು ಮತ್ತು ಗ್ರಾಮ ಪಂಚಾಯಿತಿ ಕುಪ್ಪೂರು ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಗುರುಮರುಳ ಸಿದ್ದೇಶ್ವರಸ್ವಾಮಿ ಗದ್ದಿಗೆ ಮಠದ ಆವರಣದಲ್ಲಿ ಕರುಗಳ ಪ್ರದರ್ಶನ ಮತ್ತು ಹಾಲು ಕರೆಯುವ ಸ್ಪರ್ಧೆಯ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಶ್ರೀ ಮಠದ ಧರ್ಮದರ್ಶಿಗಳಾದ ವೇ.ವಾಗೀಶ್ ಪಂಡಿತಾರಾಧ್ಯರು ಮಾತನಾಡಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀಮಠದ ಗುರುಗಳಾದ ಪ್ರ.ಬ್ರ.ಶ್ರೀ ತೇಜೇಶ್ವರ ಮಹಾಸ್ವಾಮಿಗಳು ನೆರವೇರಿಸಿದರು. ಅಧ್ಯಕ್ಷತೆಯನ್ನು ಗ್ರಾಪಂ ಅಧ್ಯಕ್ಷರಾದ ಸುಕನ್ಯ, ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಜಿಪಂ ಮಾಜಿ ಸದಸ್ಯ ರಾಮಚಂದ್ರಯ್ಯ, ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ರೆ.ಮ. ನಾಗಭೂಷಣ, ಒಕ್ಕೂಟದ ವಿಸ್ತರಣಾಧಿಕಾರಿಗಳಾದ ಸಿದ್ದಲಿಂಗಸ್ವಾಮಿ, ಇಲಾಖೆಯ ಪಶುವೈದ್ಯಾಧಿಕಾರಿಗಳಾದ ಡಾ. ಹೆಚ್.ಟಿ. ಮಂಜುನಾಥ್, ಡಾ.ಶಾಂತೇಶ್, ಡಾ.ರವಿಕುಮಾರ್, ಡಾ.ಯಶಾಧಿತ್ಯ, ಡಾ.ಪ್ರಮೋದ್ ಪಾಲ್, ಡಾ.ರಕ್ಷಿತ್ ಹಾಗೂ ಸಿಬ್ಬಂದಿಗಳಾದ ರವಿಶಂಕರ್, ಶಿವಕುಮಾರ್, ಕಂಬಯ್ಯ, ಪಾಲಾಕ್ಷಮೂರ್ತಿ, ವಿಶ್ವನಾಥ್, ದಿನೇಶ್, ಸುಮಲತ, ದಿಲೀಪ್‌ಕುಮಾರ್, ಮನೋಜ್, ಅಖಿಲಾ, ನವೀನ್, ದಯಾನಂದ್, ಚೇತನ್, ಭಾಸ್ಕರ್, ನಾಗರಾಜು, ರೇಖಾಶ್ರೀ, ದಯಾನಂದ್, ಅತಾವುಲ್ಲಾ ಖಾನ್, ಪಶುಸಖಿಯರಾದ ಉಮಾದೇವಿ, ಕವಿತ, ಗೀತಾ, ಪ್ರಮೀಳಾ, ಅಶಾ, ಕವಿತರವರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಮಳೆ ನೀರು ಕೊಯ್ಲನ್ನು ನಿರ್ಮಿಸಿಕೊಳ್ಳಲು ಸೂಚನೆ


ತುಮಕೂರು : ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಪರವಾನಗಿ ಪಡೆದು ಕಟ್ಟಡ ನಿರ್ಮಿಸುತ್ತಿರುವ ಸಾರ್ವಜನಿಕರು ಮಳೆ ನೀರು ಕೊಯ್ಲು **(Rain water harvesting structure)**ನ್ನು ನಿರ್ಮಿಸಿಕೊಳ್ಳಲು ಪಾಲಿಕೆ ಆಯುಕ್ತ ಬಿ.ವಿ.ಅಶ್ವಿಜ ಸೂಚಿಸಿದ್ದಾರೆ. ಎಲ್ಲಾ ವಸತಿ, ವಾಣಿಜ್ಯ ಹಾಗೂ ಇತರೆ ಕಟ್ಟಡಗಳಿಗೆ ಸಂಬಂಧಿಸಿದಂತೆ 100 ಚದರ ಮೀಟರ್ ಅಥವಾ ಹೆಚ್ಚು ಇರುವ ವಿಸ್ತೀರ್ಣದ ಕಟ್ಟಡಗಳಿಗೆ ಮಳೆ ನೀರು ಕೊಯ್ಲನ್ನು ನಿರ್ಮಿಸಿಕೊಳ್ಳಬೇಕು. ಈ ಕುರಿತು ಪಾಲಿಕೆ ವತಿಯಿಂದ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳು ಸ್ಥಳ ಪರಿಶೀಲನೆ ಮಾಡಲಿದ್ದು, ತಪ್ಪಿದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

## ರಾಜ್ಯಪಾಲರ ಭಾಷಣ: ಹಸಿ ಸುಳ್ಳು ಹೇಳುವ ಪರಂಪರೆಯ ಮುಂದುವರಿಕೆ- ಸುರೇಶ ಗೌಡ ಟೀಕೆ

ತುಮಕೂರು : ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿ ಅಧೋಗತಿಗೆ ಹೋಗಿರುವುದನ್ನು ಮುಚ್ಚಿಕೊಳ್ಳಲು ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಹಸಿ ಸುಳ್ಳು ಹೇಳುವ ಪರಂಪರೆಯನ್ನು ಈ ಸಾರಿಯ ರಾಜ್ಯಪಾಲರ ಭಾಷಣದಲ್ಲಿಯೂ ಮುಂದುವರಿಸಿದೆ ಎಂದು ತುಮಕೂರು ಗ್ರಾಮಾಂತರ ಶಾಸಕ ಬಿ. ಸುರೇಶ ಗೌಡರು ಟೀಕಿಸಿದ್ದಾರೆ.

ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹಲೋತ್ ಅವರು ಇಂದು ಮಾಡಿದ ಭಾಷಣದಲ್ಲಿ ಇರುವ ಎರಡನೇ ಅಂಶವೇ ಈ ಸರ್ಕಾರ ಹೇಗೆ ಜನರಿಗೆ ಮಂಕು ಬೂದಿ ಎರಚುತ್ತಿದೆ ಎಂಬುದನ್ನು ತಿಳಿಸುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತರಾಟೆಗೆ ತೆಗೆದುಕೊಂಡಿದ್ದಾರೆ.

ರಾಜ್ಯ ಸರ್ಕಾರವು 2024–25 ರ ಬಜೆಟ್‌ನಲ್ಲಿ 334 ಘೋಷಣೆಗಳನ್ನು ಮಾಡಿದೆ. ಅದರಲ್ಲಿ 331 ಆದೇಶ ಹೊರಡಿಸಿದೆ? ಎಂದು ಕಾಂಗ್ರೆಸ್ ಸರ್ಕಾರ ರಾಜ್ಯಪಾಲರಿಂದ ಹೇಳಿಸಿದೆ. ಹಾಗೆ ಅಂದರೆ ಏನು? ಕಾಗದದ ಮೇಲಿನ ಆದೇಶಗಳಿಂದ ನೆಲದ ಮೇಲೆ ಅಭಿವೃದ್ಧಿ ಆಗುತ್ತಿದ್ದರೆ ಎಲ್ಲ ಸರ್ಕಾರಗಳೂ ಕೇವಲ ಆದೇಶ ಹೊರಡಿಸಿ ಕಾಲ ಕಳೆಯಬಹುದಿತ್ತು ಎಂದು ಅವರು ಕೇಳಿದ್ದಾರೆ.



ರಾಜ್ಯದಲ್ಲಿ ಎಲ್ಲ ಅಭಿವೃದ್ಧಿ ಯೋಜನೆಗಳೂ ಸ್ಥಗಿತಗೊಂಡಿವೆ. ಕಾಂಗ್ರೆಸ್ ಶಾಸಕರೇ ತಮ್ಮ ಕ್ಷೇತ್ರಗಳಲ್ಲಿ ಏನೂ ಅಭಿವೃದ್ಧಿ ನಡೆಯುತ್ತಿಲ್ಲ ಎಂದು ಟೀಕಿಸುತ್ತಿದ್ದಾರೆ. ಈ ಸರ್ಕಾರ ಅಧಿಕಾರಕ್ಕೆ ಬಂದು 22 ತಿಂಗಳು ಆಗುತ್ತ ಬಂದಿವೆ. ಶಾಸಕರ ನಿಧಿಯಡಿ ಇದುವರೆಗೆ ಒಂದು ಪೈಸೆಯೂ ಹಣ ಬಿಡುಗಡೆಯಾಗಿಲ್ಲ. ಆದರೂ ತಮ್ಮ ಸರ್ಕಾರಕ್ಕೆ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ಹ್ಯೂಮನ್ ರೈಟ್ಸ್ ಹಬ್‌ನ ಬ್ಲಾಗ್‌ನಲ್ಲಿ "ಶೈನಿಂಗ್ ಎ ಲೈಟ್ ಇನ್ ದ ಡಾರ್ಕ್‌ನೆಸ್" ಎಂದು ಮತ್ತು "ಎ ಬ್ಲ್ಯೂ ಪ್ರಿಂಟ್ ಫಾರ್ ದ ವರ್ಲ್ಡ್" ಎಂದು ಮೆಚ್ಚುಗೆ ವ್ಯಕ್ತ ವಾಗಿದೆ ಎಂದು ರಾಜ್ಯಪಾಲರಿಂದ ಹೇಳಿಸಿ ತಮ್ಮ ಬೆನ್ನನ್ನು ತಾವೇ ತಟ್ಟಿಕೊಳ್ಳುತ್ತಿರುವುದು ಹಾಸ್ಯಾಸ್ಪದವಾಗಿದೆ ಎಂದು ಅವರು ಕುಟುಕಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ವರ್ಗಗಳಿಗೆ ಮೀಸಲಾದ 12,000 ಕೋಟಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡ ಸರ್ಕಾರ ವಾಸ್ತವದಲ್ಲಿ ಈ ಸಮುದಾಯಗಳ ಜನರ ಕ್ಷಮೆ ಕೇಳಬೇಕು. ಗ್ಯಾರಂಟಿ ಯೋಜನೆಗಳಿಂದ ಹೊರೆಯಾಗಿದೆ ಎಂದು ನಮ್ಮ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಜಿ. ಪರಮೇಶ್ವರ್ ಅವರೇ ಬೇಸರ ವ್ಯಕ್ತಪಡಿಸಿದ್ದಾರೆ ಎಂಬುದನ್ನು ಇಲ್ಲಿ ನೆನಪಿಸಿಕೊಳ್ಳಬೇಕು? ಎಂದು ಸುರೇಶಗೌಡರು ಪ್ರಸ್ತಾಪಿಸಿದ್ದಾರೆ.

ರಾಜ್ಯಪಾಲರ ಭಾಷಣ ಎಂದರೆ ಅದು ಪ್ರತಿ ವರ್ಷದ ಆರಂಭದಲ್ಲಿ ಆಗುವ ಸರ್ಕಾರದ ಮೊದಲ ಅಧಿಕೃತ ಭಾಷಣವಿದ್ದಂತೆ. ಇದು ಸರ್ಕಾರವು ಈ ವರ್ಷದಲ್ಲಿ ಕೈಗೊಳ್ಳುವ ಅಭಿವೃದ್ಧಿ ಕಾರ್ಯಗಳ ದಿಕ್ಸೂಚಿಯ ಹಾಗೆ ಇರುತ್ತದೆ. ಆದರೆ, ಈ ಸರ್ಕಾರವು ಕರ್ನಾಟಕವನ್ನು ಎಲ್ಲ ದೃಷ್ಟಿಯಿಂದಲೂ ಅಭಿವೃದ್ಧಿಯ ನವ ಮನ್ವಂತರದ ಕಡೆಗೆ ತೆಗೆದುಕೊಂಡು ಹೋಗುವ ಯಾವ ಹೊಸ ಆಲೋಚನೆಗಳಿಗೂ ತನ್ನ ಮನಸ್ಸನ್ನು ಮುಕ್ತವಾಗಿ ಇರಿಸಿಕೊಂಡಿಲ್ಲ. ಹೀಗೆಯೇ ಆದರೆ, ಮುಂದೆ ರಾಜ್ಯದ ಜನರು ಕರಾಳ ದಿನಗಳನ್ನು ಎದುರುಗೊಳ್ಳಬೇಕಾಗುತ್ತದೆ ಎಂದು ಅವರು ಎಚ್ಚರಿಸಿದ್ದಾರೆ.

ಶಿಕ್ಷಣ ಕ್ಷೇತ್ರಕ್ಕಾಗಿ ಸರ್ಕಾರವು ಅಪಾರ ಹಣವನ್ನು ವ್ಯಯ ಮಾಡುತ್ತಿದೆ ಎಂದು ರಾಜ್ಯಪಾಲರಿಂದ ಹೇಳಿಸಿರುವ ಸರ್ಕಾರಕ್ಕೆ ಕನಿಷ್ಠ ಮಾನ ಮರ್ಯಾದೆ ಇಲ್ಲ ಎಂದು ಗೊತ್ತಾಗುತ್ತದೆ. ರಾಜ್ಯದ ಅತ್ಯಂತ ಹಳೆಯ ವಿಶ್ವವಿದ್ಯಾಲಯಗಳಾದ ಮೈಸೂರು ಮತ್ತು ಕರ್ನಾಟಕ ವಿಶ್ವವಿದ್ಯಾಲಯಗಳು ಮುಚ್ಚುವ ಸ್ಥಿತಿಗೆ ಬಂದಿವೆ. ಪಿಂಚಣಿ ಕೊಡಲೂ ಹಣ ಇಲ್ಲ ಎಂದು ಪತ್ರಿಕೆಗಳಲ್ಲಿ ವರದಿಯಾಗಿ ಬಹಳ ದಿನಗಳೇನೂ ಆಗಿಲ್ಲ. ಒಂದು ರಾಜ್ಯಕ್ಕೆ ಸಮರ್ಥವಾದ ಮಾನವ ಸಂಪನ್ಮೂಲ ಬೇಕು. ಅದನ್ನು ತಯಾರಿಸುವುದು ವಿಶ್ವವಿದ್ಯಾಲಯಗಳು. ಅಂಥ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಹೊರಟಿರುವ ಸಿದ್ದರಾಮಯ್ಯ ಸರ್ಕಾರವನ್ನು ಯಾರೂ ಕ್ಷಮಿಸಲೂ ಸಾಧ್ಯವಿಲ್ಲ, ಕಾಪಾಡಲೂ ಸಾಧ್ಯವಿಲ್ಲ ಎಂದು ಅವರು ಕಟುವಾಗಿ ಟೀಕಿಸಿದ್ದಾರೆ.

# ಮರಬಹಳ್ಳಿ ರೈತರಿಗೆ ಶೀಘ್ರ ರಸ್ತೆ: ಸಚಿವ ಕೆ.ಎನ್.ರಾಜಣ್ಣ ಭರವಸೆ



ಮಧುಗಿರಿ: ಕಸಬಾ ಮರಬಹಳ್ಳಿ ಗ್ರಾಮದ ರೈತರಿಗೆ ಅನುಕೂಲವಾಗುವಂತೆ ರಸ್ತೆ ನಿರ್ಮಿಸಿಕೊಡಲಾಗುವುದು ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ತಿಳಿಸಿದರು. ಅವರು ಕಸಬಾ ವ್ಯಾಪ್ತಿಯ ಶೆಟ್ಟಿಹಳ್ಳಿ ಕೆರೆಗೆ ಅಧಿಕಾರಿಗಳೊಂದಿಗೆ ಆಕಸಿ ಕವಾಗಿ ಕವಾಗಿ ಭೇಟಿ ನೀಡಿದ ಸಂದರ್ಭ ಮಾತನಾಡಿದರು.

ಈ ಹಿಂದೆ ಮಳೆ ಬಂದಾಗ ಕೆರೆಯ ಏರಿ ಮೇಲೆ ಓಡಾಡಲು ರೈತರಿಗೆ ಭಾರಿ ಅನನುಕೂಲವಾಗಿತ್ತು ಹಾಗೂ ಮಳೆಯ ನೀರು ಹೆಚ್ಚಾದಾಗ ಸಂಪರ್ಕ ರಸ್ತೆ ಇಲ್ಲದ ಕಾರಣ ರೈತರ ಎತ್ತಿನ ಗಾಡಿಯೊಂದು ನೀರಿನ ರಭಸಕ್ಕೆ ಕೊಚ್ಚಿಕೊಂಡು ಹೋಗಿತ್ತು.

ಮರಬಹಳ್ಳಿಯ ರೈತರು ಶೆಟ್ಟಿ ಹಳ್ಳಿ ಕೆರೆ ಮೂಲಕ ತಮ್ಮ ಜಮೀನುಗಳಿಗೆ ಹೋಗಬೇಕಾದ ಅನಿರ್ವಾಯತೆ ಇದೆ. ಅವರು ಬೆಳೆದ ಬೆಳೆಗಳನ್ನು ತಮ್ಮ ಜಮೀನುಗಳಿಂದ ಸಾಗಿಸಲು ಕಷ್ಟಕರವಾಗಿದೆ. ಆದ್ದರಿಂದ ಅದಷ್ಟು ಬೇಗ ರಸ್ತೆಯನ್ನು ನಿರ್ಮಿಸುವಂತೆ ಸ್ಥಳದಲ್ಲಿದ್ದ ಲೋಕೋಪಯೋಗಿ ಇಲಾಖೆಯ ಅಧಿಕಾರಿಗೆ ಸೂಚಿಸಿ, ಕಾಮಗಾರಿಯ ಅಂದಾಜು ಪಟ್ಟಿ ತಯಾರಿಸಿಕೊಡಿ, ಅವಶ್ಯವಿರುವ ಅನುದಾನವನ್ನು ಬಿಡುಗಡೆ ಮಾಡಿಸಲಾಗುವುದು ಎಂದರು.

ತುಮುಲ್ ನಿರ್ದೇಶಕ ಬಿ.ನಾಗೇಶ್ ಬಾಬು, ಪುರಸಭಾಧ್ಯಕ್ಷ ಲಾಲಪೇಟೆ ಮಂಜುನಾಥ್, ಲೋಕೋಪಯೋಗಿ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ್ ಹಾಗೂ ಗ್ರಾಮಸ್ಥರು ಇದ್ದರು.

# ಕಸ್ತೂರಿ ತಿಲಕ, ಕಲಾಸಿರಿ ಮತ್ತು ಲೇಖಸಿರಿ ಪ್ರಶಸ್ತಿಗಳಿಗೆ ಆಯ್ಕೆ





ಪಾವಗಡ: ಗಡಿನಾಡಿನ ಕನ್ನಡ ಸಂಘಟನೆಯಾದ ವೈ.ಎನ್.ಹೊಸಕೋಟೆ ಹೋಬಳಿ ಕೇಂದ್ರದ ಕನ್ನಡ ಕಲಾ ಮತ್ತು ಸಾಂಸ್ಕೃತಿಕ ಮಂಡಲಿ (ರಿ) ಯು ಕೊಡಮಾಡುವ ತಾಲ್ಲೂಕು ಮಟ್ಟದ ಮೂರು ಪ್ರಶಸ್ತಿಗಳಿಗೆ ಡಾ.ವಿ.ಚಲುವರಾಜನ್, ಸಣ್ಣನಾಗಪ್ಪ ಮತ್ತು ಹ.ಬ.ರಾಮಚಂದ್ರಪ್ಪ ಆಯ್ಕೆಯಾಗಿದ್ದಾರೆ ಎಂದು ಮಂಡಲಿಯ ಅಧ್ಯಕ್ಷ ಎ.ಓ.ನಾಗರಾಜು ಭಾನುವಾರ ತಿಳಿಸಿದರು.

ಸುಮಾರು 40 ವರ್ಷಗಳಿಂದ ಈ ಭಾಗದಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಪ್ರಗತಿಗಾಗಿ ಮಂಡಲಿಯು ಶ್ರಮಿಸುತ್ತಾ ಬರುತ್ತಿದೆ. ಅದರ ಭಾಗವಾಗಿ ಈ ವರ್ಷದಿಂದ ಅರ್ಹರಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸುವ ಕಾರ್ಯವನ್ನು ಪ್ರಾರಂಭಿಸಿದೆ. ಅದರಂತೆ ಗಡಿನಾಡಿನ ಕನ್ನಡ ಸೇವೆಗಾಗಿ ನೀಡುವ "ಕಸ್ತೂರಿತಿಲಕ" ಪ್ರಶಸ್ತಿಗೆ ಹ.ಬ.ರಾಮಚಂದ್ರಪ್ಪ, ಸಾಹಿತ್ಯ ಸೇವೆಗಾಗಿ ನೀಡುವ "ಲೇಖಸಿರಿ" ಪ್ರಶಸ್ತಿಗೆ ಸಾಹಿತಿ ಸಣ್ಣನಾಗಪ್ಪ ಹಾಗೂ ಲಲಿತ ಕಲೆಗಳ ಸಾಧನೆಗಾಗಿ ನೀಡುವ "ಕಲಾಸಿರಿ" ಪ್ರಶಸ್ತಿಗೆ ಡಾ.ವಿ.ಚೆಲುವರಾಜನ್ ಭಾಜನರಾಗಿರುವುದಕ್ಕೆ ಹರ್ಷಿಸುತ್ತೇವೆ. ಪ್ರಶಸ್ತಿಯು ನೆನಪಿನ ಕಾಣಿಕೆ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗಳಿಗೆ ಅರ್ಹ ವ್ಯಕ್ತಿಗಳನ್ನು ಆಯ್ಕೆ ಮಾಡುವಲ್ಲಿ ಅಯ್ಕೆ ಸಮಿತಿ ಯಶಸ್ವಿಯಾಗಿದೆ.

ಪ್ರಶಸ್ತಿಯನ್ನು ಮಾರ್ಚಿ 8 ರಂದು ರಾತ್ರಿ ವೈ.ಎನ್.ಹೊಸಕೋಟೆ ಗ್ರಾಮದ ಬಾಲಕರ ಶಾಲೆಯ ಆವರಣದ ರಂಗಮಂದಿರದಲ್ಲಿ ಹಮ್ಮಿಕೊಂಡಿರುವ ಮಂಡಲಿಯ ಚತುರ್ ದಶಮಾನೋತ್ಸವ 40 ಕಾರ್ಯಕ್ರಮಗಳ ಉದ್ಘಾಟನೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ನೀಡಲಾಗುವುದು.

# ಕರಾಟೆ ಸಂಭ್ರಮದಲ್ಲಿ ಆಕರ್ಷಕ ಪ್ರದರ್ಶನ



ತುಮಕೂರು: ಲಯನ್ಸ್ ಮಾರ್ಷಲ್ಆರ್ಟ್ಸ್ ಅಸೋಸಿಯೇಷನ್ ಹಾಗೂ ಕರಾಟೆಡೂಟ್ರೈನಿಂಗ್ ಸ್ಕೂಲ್ಆಶ್ರಯದಲ್ಲಿ ಬೆಳಗುಂಬದ ಕಿಡ್ಸ್‌ರಾಕ್ ಫ್ರೀ ಸ್ಕೂಲ್‌ನಲ್ಲಿ ನಡೆದಕರಾಟೆ ಸಂಭ್ರಮಕಾರ್ಯಕ್ರಮದಲ್ಲಿಕರಾಟೆತರಬೇತಿ ಪಡೆಯುತ್ತಿರುವ ಮಕ್ಕಳು ಆಕರ್ಷಕ ಪ್ರದರ್ಶನ ನೀಡಿ ಗಮನ ಸೆಳೆದರು.

ಕಾರ್ಯಕ್ರಮ ಉದ್ಘಾಟಿಸಿದ ಕನ್ನಡ ಸೇನೆ ಜಿಲ್ಲಾಧ್ಯಕ್ಷ ಧನಿಯಾಕುಮಾರ್, ಕರಾಟೆ ರಕ್ಷಣಾತ್ಮಕ ಕಲೆ. ಇಂದು ಸಮಾಜದಲ್ಲಿ ದೌರ್ಜನ್ಯ ಕೃತ್ಯಗಳು ಹೆಚ್ಚಾಗಿದ್ದು, ಮಕ್ಕಳು ಕರಾಟೆಕಲಿತರೆದುಷ್ಟರಿಂದ ರಕ್ಷಿಸಿಕೊಳ್ಳಲು ಸಹಾಯವಾಗುತ್ತದೆ. ವಿಶೇಷವಾಗಿ ಹೆಣ್ಣುಮಕ್ಕಳು ಕರಾಟೆಕಲಿಯಬೇಕುಎಂದು ಹೇಳಿದರು.

ಬಿವಿಎಂ ಪ್ರೌಢ ಶಾಲೆ ಕಾರ್ಯದರ್ಶಿ ವೆಂಕಟೇಶ್‌ಬಾಬು, ಶಾಲೆಯ ಮುಖ್ಯ ಶಿಕ್ಷಕಿ ಕೆ.ಜ್ಯೋತಿ, ವಕೀಲ ಹಿರೇಹಳ್ಳಿ ಮಹೇಶ್, ಅಂಬೇಡ್ಕರ್‌ಅಭಿವೃದ್ಧಿ ನಿಗಮದಜಿಲ್ಲಾ ವ್ಯವಸ್ಥಾಪಕಆರ್.ಮಂಜುನಾಥ್, ಮುಖಂಡರಾದ ಲೋಕೇಶ್‌ಆಚಾರ್ಯ, ಸದಾಶಿವಯ್ಯ, ಮಂಜುನಾಥ್, ಲಯನ್ ಮಾರ್ಷಲ್‌ಆರ್ಟ್ಸ್ ಅಸೋಸಿಯೇಷನ್ ಅಧ್ಯಕ್ಷ ಸಿ.ಜಿ.ಪ್ರಕಾಶ್ ಮೊದಲಾದವರು ಭಾಗವಹಿಸಿದ್ದರು.

# ನಾಳೆ ರಾಜದಾನಿಯಲ್ಲಿ ಬಿಸಿಯೂಟ ತಯಾರಕರರಿಂದ ಪ್ರತಿಭಟನೆ

ತುಮಕೂರು: ಬಿಸಿಯೂಟ ತಯಾರಕರು ಶಾಲೆಗಳಲ್ಲಿ ಬಿಸಿಯೂಟ ತಯಾರಿ ನಿಲ್ಲಿಸಿ ಧರಣಿ ನಡೆಸಲು ತೀರ್ಮಾನಿಸಿದ್ದಾರೆ. ಸೇವೆ ಕಾಯಂ, ವೇತನ ಹೆಚ್ಚಳ ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮಾರ್ಚ್ 5ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಎಐಟಿಯುಸಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಿದ್ದಾರೆ.

'ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ನೀಡಿದ ಭರವಸೆಯಂತೆ ಬಿಸಿಯೂಟ ತಯಾರಕರನ್ನು ಕಾಯಂ ಮಾಡಬೇಕು. ಬಿಸಿಯೂಟ ಯೋಜನೆ ಎಂಬುವುದನ್ನು ಕೈಬಿಟ್ಟು, ತಯಾರಕರನ್ನು ಕಾರ್ಮಿಕರನ್ನಾಗಿ ಪರಿಗಣಿಸಬೇಕು' ಎಂದು ಎಐಟಿಯುಸಿ ಜಿಲ್ಲಾ ಅಧ್ಯಕ್ಷ ಕಂಬೇಗೌಡ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಒತ್ತಾಯಿಸಿದರು. ಅಕ್ಷರ ದಾಸೋಹ ಬಿಸಿಯೂಟ ತಯಾರಕರ ಫೆಡರೇಷನ್ ಅಧ್ಯಕ್ಷೆ ರಾಧಮ್ಮ, '2023–24ರ ಸಾಲಿನ ಬಜೆಟ್‌ನಲ್ಲಿ ?1 ಸಾವಿರ ವೇತನ ಘೋಷಿಸಿದ್ದು ಬಿಟ್ಟರೆ, ಯಾವುದೇ ಸವಲತ್ತು ಸಿಕ್ಕಿಲ್ಲ. ಕಳೆದ 23 ವರ್ಷಗಳಿಂದ ಕೆಲಸ ಮಾಡುತ್ತಿರುವ ಬಿಸಿಯೂಟ ತಯಾರಕರು ಸೌಲಭ್ಯದಿಂದ ವಂಚಿತರಾಗಿದ್ದಾರೆ. ಇದೀಗ ಬಿಸಿಯೂಟ ತಯಾರಿಕೆಯನ್ನು ಖಾಸಗಿಯವರಿಗೆ ವಹಿಸಿ ಮಹಿಳೆಯರನ್ನು ವಂಚಿಸುವ ಹುನ್ನಾರ ನಡೆಯುತ್ತಿದೆ. ಸರ್ಕಾರ ಇದನ್ನು ಕೈಬಿಡಬೇಕು' ಎಂದು ಆಗ್ರಹಿಸಿದರು. ಫೆಡರೇಷನ್‌ನ ಜಿ.ಎಸ್.ಚಂದ್ರಕಲಾ, ಎ.ಬಿ.ಉಮಾದೇವಿ, ವನಜಾಕ್ಷಿ, ಪುಷ್ಪಲತಾ, ಸಾವಿತ್ರಮ್ಮ, ಕಾಂತರಾಜು, ಚಂದ್ರಶೇಖರ್ ಉಪಸ್ಥಿತರಿದ್ದರು.

# ಒಳಮೀಸಲಾತಿ ಜಾರಿ ಮಾಡುವಲ್ಲಿ ರಾಜ್ಯ ಸಕಾರ ವಿಫಲ: ಗೋವಿಂದ ಕಾರಜೋಳ



ತುಮಕೂರು: ಮೂವತ್ತು ವರ್ಷಗಳ ಮಾದಿಗರ ಒಳಮೀಸಲಾತಿಗೆ ಸುಪ್ರೀಂಕೋರ್ಟಿನಿಂದ ಅನುಮೋದನೆ ಸಿಕ್ಕರೂ ರಾಜ್ಯದಲ್ಲಿರುವ ಕಾಂಗ್ರೆಸ್ ಸರಕಾರ ಒಳ ಮೀಸಲಾತಿಯನ್ನು ಜಾರಿ ಮಾಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಸಂಸದ ಹಾಗೂ ಮಾಜಿ ಸಚಿವ ಗೋವಿಂದ ಎಂ ಕಾರಜೋಳ ಆಪಾದಿಸಿದ್ದಾರೆ.

ನಗರದ ಎಂಪ್ರೆಸ್ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ಮಾದಿಗ ದಂಡೋರ (ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ) ಮಾದಿಗ ವಿದ್ಯಾರ್ಥಿ ಯುವ ಪರಿಷತ್ ಇವರ ಆಶ್ರಯದಲ್ಲಿ ಜಗದ್ಗುರು ಪರಮಪೂಜ್ಯ ಶ್ರೀಆದಿ ಜಾಂಬವ ಜಯಂತಿ, 7ನೇ ಶೈಕ್ಷಣಿಕ ಜಾಗೃತಿ ಸಮಾವೇಶ, ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ, ಜಿಲ್ಲೆಯ ಮಾದಿಗ ಸಮುದಾಯದ ಜನಗಣತಿ ಅಭಿಯಾನ ಹಾಗೂ ಮಾದಿಗ ಸಮುದಾಯದ ವಧು–ವರರ ಸಮಾವೇಶ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಾದಿಗ ಸಮುದಾಯವು ಸುಮಾರು ವರ್ಷಗಳಿಂದ ಅಂಬೇಡ್ಕರ್ ಅವರು ನೀಡಿದ ಶಿಕ್ಷಣ, ಸಂಘಟನೆ, ಹೋರಾಟದ ಹಾದಿಯಲ್ಲಿ ತಮಗೆ ಬರಬೇಕಾದ ಒಳ ಮೀಸಲಾತಿ ಪಾಲನ್ನು ನೀಡಬೇಕು ಎಂದು ಅನೇಕ ರೀತಿಯ ಸಂಘರ್ಷ ಹೋರಾಟಗಳ ಕಾರಣ ದಿಂದಾಗಿ,ನಮ್ಮ ನಾಯಕ ನರೇಂದ್ರ ಮೋದಿಯವರು ಕೇಂದ್ರ ಸರಕಾರ ಒಳ ಮೀಸಲಾತಿ ಜಾರು ಮಾಡುವಲ್ಲಿ ಬದ್ಧವಾಗಿದೆ ಎಂದು ಸುಪ್ರೀಂಕೋರ್ಟ್‌ಗೆ ಮನವರಿಕೆ ಮಾಡಿ ಸುಮಾರು ಆರು ತಿಂಗಳ ಹಿಂದೆ ಸುಪ್ರೀಂ ಕೋರ್ಟಿನಿಂದ ಸಿಹಿ ಸುದ್ದಿ ಕೊಡಿಸಿದರು.ಕೂಡ ರಾಜ್ಯ ಸರಕಾರ ಒಳ ಮೀಸಲಾತಿಯನ್ನು ಅನುಷ್ಠಾನಗೊಳಿಸುವಲ್ಲಿ ಸಂಪೂರ್ಣ ವಿಫಲವಾಗಿದ್ದು ಕಾಂಗ್ರೆಸ್ ಪಕ್ಷದಲ್ಲಿರುವ ಮಾದಿಗ ಸಮುದಾಯದ ಮುಖಂಡರು ಸಮುದಾಯವನ್ನ ದಾರಿ ತಪ್ಪಿಸುವ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಕಿಡಿ ಕಾರಿದರು.

ತುಮಕೂರು ಗ್ರಾಮಾಂತರ ಶಾಸಕ ಸುರೇಶ್‌ಗೌಡ ಮಾತನಾಡಿ,ಜಗಜೀವನ್ ರಾಮ್,ಅಂಬೇಡ್ಕರ್ ಅವರ ಆದರ್ಶ ಗುಣಗಳನ್ನು ಇಂದಿನ ಯುವ ಪೀಳಿಗೆ ಮೈಗೂಡಿಸಿಕೊಳ್ಳಬೇಕಿದ್ದು,ಮಾದಿಗ ಸಮುದಾಯದಲ್ಲಿ ಐಎಎಸ್, ಕೆಎಎಸ್ ಓದುವವರ ಸಂಖ್ಯೆ ಕಡಿಮೆ ಇದ್ದು, ಪರಿಶಿಷ್ಟ ಜಾತಿ ಸಮುದಾಯದ ಇತರೆ ಸಮುದಾಯಗಳಂತೆ ಮಾದಿಗ ಸಮುದಾಯ ಸುಶಿಕ್ಷಿತರಾಗಬೇಕು ಬಡತನವನ್ನ, ದಾರಿದ್ರ್ಯವನ್ನು ದೂರ ಮಾಡುವ ಶಕ್ತಿ ಶಿಕ್ಷಣಕ್ಕೆ ಇದ್ದು,ಅಂತಹ ಶಿಕ್ಷಣದಿಂದ ಮಾದಿಗ ಸಮುದಾಯ ವಂಚಿತವಾಗುತ್ತಿದೆ ಡಾ.ಬಿ.ಆರ್ ಅಂಬೇಡ್ಕರ್ ನೀಡಿರುವ ಸಂವಿಧಾನಿಕ ಶಿಕ್ಷಣ ವ್ಯವಸ್ಥೆಯನ್ನ ಎಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದರು.

ಕ್ಯಾನ್ಸರ್ ಕಿದ್ವಾಯಿ ಆಸ್ಪತ್ರೆಯ ಮಾಜಿ ನಿರ್ದೇಶಕರು ಹಾಗೂ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಡಾ.ವಿಜಯಲಕ್ಷ್ಮಿ, ಮಾದಿಗ ವಿದ್ಯಾರ್ಥಿ ಯುವ ಪರಿಷತ್‌ನ ರಾಜ್ಯಾಧ್ಯಕ್ಷ ವಿ. ರವಿವರ್ಮ ಮಾತನಾಡಿದರು.

ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಮೂಲೆ ಮೂಲೆಗಳಿಂದ ಆಗಮಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೆರವೇರಿಸಲಾಯಿತು.ಮಾದಿಗ ಸಮುದಾಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಆತ್ಮೀಯವಾಗಿ ಸತ್ಕರಿಸಲಾಯಿತು ಪ್ರಥಮ ಬಾರಿಗೆ ಯುವ ಪರಿಷತ್ ವತಿಯಿಂದ ಕರೆಯ ಲಾಗಿದ್ದ ವಧು ವರರ ಅನ್ವೇಷಣೆಗಾಗಿ ಸುಮಾರು 200 ಹೆಚ್ಚು ಅರ್ಜಿಗಳು ಹೆಣ್ಣು ಗಂಡಿಗಾಗಿ ಶೋಧನ ಕಾರ್ಯದಲ್ಲಿ ತೊಡಗಿದ್ದವು.

ಈ ಸಂದರ್ಭದಲ್ಲಿ ಮಾದಿಗ ದಂಡೋರದ ಸಂಸ್ಥಾಪಕ ರಾಜ್ಯಾಧ್ಯಕ್ಷ ಎಂ.ಶಂಕ್ರಪ್ಪ, ಪ್ರಧಾನ ಕಾರ್ಯದರ್ಶಿ ಗಳಾದ ಆರ್. ಪ್ರಕಾಶ್,ಮಾಜಿ ಶಾಸಕ ಗಂಗಹನುಮಯ್ಯ,ಭಾಜಪ ಎಸ್.ಸಿ. ಘಟಕ ಜಿಲ್ಲಾಧ್ಯಕ್ಷರಾದ ಅಂಜಿನಪ್ಪ, ಯುವ ಮುಖಂಡರಾದ ಪ್ರಕಾಶ್, ನವೀನ್ ಕುಮಾರ್, ಕಿರಣ್ ಕುಮಾರ್ ಸೇರಿದಂತೆ ವಿವಿಧ ಜಿಲ್ಲೆಗಳ ಮಾದಿಗ ಯುವ ಪರಿ?ತ್ ಸಂಘಟನೆಯ ಮುಖಂಡರು, ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಕುಸುಮ ಅಬ್ಬೂರು ಅವರ 'ದೂರ ತೀರ ಯಾನ' ಕಾದಂಬರಿ ಲೋಕಾರ್ಪಣೆ

# 'ಜೀವನ ಯಾನದ ತತ್ವಜ್ಞಾನೀಯವಾದ ಚಿಂತನಾ ಪ್ರಧಾನ ಕೃತಿ' – ಬರಗೂರು



ತುಮಕೂರು: ಕನ್ನಡ ಲೇಖಕಿಯರ ಪರಂಪರೆಯಲ್ಲಿ ಆಧುನಿಕ ಮಹಿಳಾ ಲೇಖಕಿಯರ ಸಂವೇದನೆ ಭಿನ್ನ ಹಾಗೂ ವಿಶಿಷ್ಟವಾದದ್ದು. ಕನ್ನಡ ಸಂಸ್ಕೃತಿಗೆ ಕನ್ನಡ ಕಟ್ಟಿದ ಮಹಿಳಾ ಲೇಖಕಿಯರ ಶ್ರಮ ಮೌಲಿಕವಾದುದು. ಇದರ ಮುಂದುವರೆ ಯಾಗಿ ಕುಸುಮ ಅಬ್ಬೂರು ಅವರ 'ದೂರ ತೀರ ಯಾನ' ಹೊಸ ಸಂವೇದನೆ, ಹೊಸ ಅಭಿವ್ಯಕ್ತಿಯ ಕಥನವಾಗಿ ಪ್ರಕಟವಾಗಿದೆ. ಇದರಲ್ಲಿ ಹಳ್ಳಿ – ನಗರಗಳ ಕಥನ, ಶಿಕ್ಷಣ, ಪ್ರತಿರೋಧ, ವೈಚಾರಿಕತೆ, ಕೌಟುಂಬಿಕತೆ, ಅಧ್ಯಾತ್ಮಿಕತೆ – ಇವುಗಳ ನಡುವಿನ ಸಂಘರ್ಷ ಹಾಗೂ ದ್ವಂದ್ವಗಳನ್ನು ಗ್ರಾಮೀಣ ಸಂವೇದನೆಯ ಸ್ತ್ರೀಯ ಕಣ್ಣುಗಳಿಂದ ಅನ್ವೇಷಿಸಲಾಗಿದೆ; ಧರ್ಮ, ಸಹಿಷ್ಣುತೆ, ಸತ್ಯನಿಷ್ಠತೆಯ ಮೌಲ್ಯಗಳನ್ನು ವ್ಯಾಖ್ಯಾನಿಸಲಾಗಿದೆ. ಕೊನೆಗಾಣದ ಬದುಕಿನ ಚಿತ್ರಣಗಳನ್ನು ಅರ್ಥಪೂರ್ಣವಾದ ಶೀರ್ಷಿಕೆಯ ಮೂಲಕ ಲೇಖಕಿ ಪರಿಣಾಮಕಾರಿಯಾಗಿ ಕಟ್ಟಿಕೊಟ್ಟಿದ್ದಾರೆ. ಹಾಗಾಗಿ ಇದೊಂದು ಅವರ ಜೀವನದ ಬಗೆಗಿನ ತತ್ವಜ್ಞಾನೀಯವಾದ ಚಿಂತನಾ ಪ್ರಧಾನವಾದ ಕಾದಂಬರಿಯಾಗಿದೆ ಎಂದು ಬರಗೂರು ರಾಮಚಂದ್ರಪ್ಪನವರು ಹೇಳಿದರು.

ಕಿರಂ ಪ್ರಕಾಶನ ಪ್ರಕಟಿಸಿರುವ ಲೇಖಕಿ ಕುಸುಮ ಅಬ್ಬೂರು ಅವರ 'ದೂರ ತೀರ ಯಾನ' ಕಾದಂಬರಿಯನ್ನು ಶನಿವಾರ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯದಲ್ಲಿ ಲೇಖಕಿಯರ ದೊಡ್ಡ ಪರಂಪರೆ ಇದೆ. ಆದರೆ ಈ ಪರಂಪರೆಯನ್ನು ವಿಮರ್ಶಾ ಲೋಕ ಸರಿಯಾಗಿ ಗುರುತಿಸಿಲ್ಲ. ಕನ್ನಡದ ಹಲವಾರು ಲೇಖಕಿಯರು ತಮ್ಮ ಮಿತಿಯನ್ನು ಮೀರಿ, ಪುರುಷರಿಗಿಂತ ಭಿನ್ನವಾದ, ಉತ್ತಮವಾದ ಸಾಹಿತ್ಯ ರಚಿಸಿದ್ದಾರೆ. ವಾಚನಾಭಿರುಚಿ ಬೆಳೆಸಿದ್ದಾರೆ. ಇದನ್ನು ಗುರುತಿಸಿ ಗೌರವಿಸುವ ಕೆಲಸ ಆಗಬೇಕು. ಕುಸುಮ ಅಬ್ಬೂರು ಅವರದು ಸಾವಧಾನದ ಬರವಣಿಗೆಯಾಗಿದೆ. ಇವರ ಕೃತಿಗಳಲ್ಲಿಯೂ ಮಹಿಳೆಯರೇ ಪ್ರಧಾನ ಭೂಮಿಕೆಯಲ್ಲಿದ್ದು, ಸಮಾಜದ ಸ್ಥಾಪಿತ ಸಂಕೋಲೆಗಳನ್ನು ಮೀರುವ ಪ್ರಯತ್ನ ಮಾಡಿದ್ದಾರೆ ಎಂದು ಬರಗೂರು ಹೇಳಿದರು.

ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಹಂಪಿ ಕನ್ನಡ ವಿ.ವಿ. ವಿಶ್ರಾಂತ ಕುಲಪತಿ ಹಾಗೂ ಜಾನಪದ ತಜ್ಞಡಾ. ಹಿ.ಚಿ. ಬೋರಲಿಂಗಯ್ಯ ನಿರ್ಲಕ್ಷಿತ ಗ್ರಾಮೀಣ ಸಮಾಜದ ನಿಜವಾದ ಚರಿತ್ರೆಯನ್ನು ಕಟ್ಟಿಕೊಡುವ ಕೆಲಸವನ್ನು ಕುಸುಮ ಅಬ್ಬೂರು ಅವರ ಕೃತಿಗಳು ಮಾಡಿವೆ ಎಂದರು. ಪತ್ರಕರ್ತ, ಕಥೆಗಾರ ಚ.ಹ. ರಘುನಾಥ್, ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಎಚ್.ಎಲ್. ಪುಷ್ಪ, ಅಧ್ಯಕ್ಷತೆ ವಹಿಸಿದ್ದ ಲೇಖಕ ಅಗ್ರಹಾರ ಕೃಷ್ಣಮೂರ್ತಿ, ಲೇಖಕಿ ಕುಸುಮ ಅಬ್ಬೂರು ಮಾತನಾಡಿದರು.

# ಧಾರ್ಮಿಕ ಕ್ಷೇತ್ರಗಳ ಪುನಶ್ಚೇತನಕ್ಕೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ನೆರವು



ಕುಣಿಗಲ್: ಧಾರ್ಮಿಕ ಕ್ಷೇತ್ರದ ಪುನಶ್ಚೇತನ ಕಾರ್ಯಕ್ರಮಗಳಿಗಾಗಿ ಶ್ರೀ ಧರ್ಮಸ್ಥಳ ಗ್ರಾಮ ಅಭಿವೃದ್ಧಿ ಯೋಜನೆ ವತಿಯಿಂದ ನೆರವು ನೀಡಲಾಗುತ್ತಿದೆ ಎಂದು ಜಿಲ್ಲಾ ಯೋಜನಾ ನಿರ್ದೇಶಕ ಸತೀಶ್ ಸುವರ್ಣ ತಿಳಿಸಿದರು. ತಾಲೂಕಿನ ಹುತ್ರಿ ಹೋಬಳಿ ಹೊಸೂರು ಗ್ರಾಮದ ಅಭಯ ಹನುಮ ದೇವಸ್ಥಾನದ ಕಟ್ಟಡದ ಕಾಮಗಾರಿಗೆ ಕ್ಷೇತ್ರದ ವತಿಯಿಂದ 2 ಲಕ್ಷ ರೂಗಳ ಚೆಕ್ ವಿತರಿಸಿ ಮಾತನಾಡುತ್ತಾ ಜಿಲ್ಲೆಯಲ್ಲಿ ಎಂಟು ಕೆರೆಗಳನ್ನು ಪುನಶ್ಚೇತನ ಮಾಡಲಾಗಿದೆ 15 ವಾತ್ಸಲ್ಯ ಮನೆ ನಿರ್ಮಿಸಲಾಗಿದೆ ಯೋಜನೆಯು ಭಾರತೀಯ ಸ್ಟೇಟ್ ಬ್ಯಾಂಕ್ ನ ಪ್ರತಿನಿಧಿಯಾಗಿ ಕೆಲಸ ಮಾಡುತ್ತಿದ್ದು ಕುಣಿಗಲ್ ತಾಲೂಕಿನಲ್ಲಿ ಸ್ವಯಂ ಸೇವಾ ಸಂಘದ ಸದಸ್ಯರಿಗೆ ಸುಮಾರು ನಾಲ್ಕು ಕೋಟಿ ಲಾಭಾಂಶ ಮತ ವಿತರಣೆ ಮಾಡಲಾಗಿದ್ದು, ಸೇವಾಯೋಜನೆಯ ವತಿಯಿಂದ ಹತ್ತು ಹಲವು ಕಾರ್ಯಕ್ರಮಗಳನ್ನು ಸಮುದಾಯದ ಅಭಿವೃದ್ಧಿಗಾಗಿ ಹಮ್ಮಿಕೊಳ್ಳಲಾಗಿದ್ದು ಈ ಮೂಲಕ ಜನರಿಗೆ ನೆರವನ್ನು ನೀಡುತ್ತಿದೆ ಎಂದರು. ತಾಲೂಕು ಯೋಜನಾಧಿಕಾರಿ ಸತೀಶ್ ಶೇಟ್ ಪೂಜ್ಯರಾದ ವೀರೇಂದ್ರ ಹೆಗಡೆಯವರ ನೇತೃತ್ವದಲ್ಲಿ ಸಮಾಜಕ್ಕಾಗಿ ಹಲವು ಕಾರ್ಯಗಳನ್ನು ರೂಪಿಸಿಕೊಂಡು ನಡೆಸಿಕೊಂಡು ಬರಲಾಗುತ್ತಿದ್ದು ಇರಲಿ ಸಾವಿರಾರು ಉದ್ಯೋಗಿಗಳಿಗೆ ಉದ್ಯೋಗ ನೀಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಮೇಲ್ವಿಚಾರಕ ಸುಧೀಂದ್ರ ಹಾಗೂ ಸೇವಾ ಪ್ರತಿನಿಧಿ ತಿಮಮ್ಮ ಇದ್ದರು.

# ನಕಲಿ ಜಾತಿ ಪ್ರಮಾಣದಡಿ ಹಕ್ಕುಪತ್ರ ಪಡೆಯುವುದನ್ನು ತಡೆಯಲು ಮನವಿ




ತುಮಕೂರು: ಹಂದಿಜೋಗೀಸ್ ಜಾತಿ ಹೆಸರಿನಡಿ ನಕಲಿ ಜಾತಿಪತ್ರ ಪಡೆದು ಹಕ್ಕುಪತ್ರ ಪಡೆಯುತ್ತಿರುವುದನ್ನು ತಡೆಯುವಂತೆ ತುಮಕೂರು ಜಿಲ್ಲಾ ಹಂದಿಜೋಗೀಸ್ ಸಂಘ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರಿಗೆ ಮನವಿ ಸಲ್ಲಿಸಿತು.

ತುಮಕೂರು ಜಿಲ್ಲೆಯಲ್ಲಿ ಹಂದಿಜೋಗೀಸ್ ಜನಾಂಗಕ್ಕೆ ಸೇರದ ಕೆಲ ಅರೆ ಅಲೆಮಾರಿ ಜನಾಂಗದವರು 'ಹಂದಿಜೋಗೀಸ್' ಜನಾಂಗದ ಹೆಸರಿನಲ್ಲಿ ಜಾತಿ ಪ್ರಮಾಣ ಪತ್ರವನ್ನು ಪಡೆದುಕೊಂಡು ಸರ್ಕಾರದ ವಿವಿಧ ಸವಲತ್ತುಗಳನ್ನು ಪಡೆದುಕೊಳ್ಳುತ್ತಿದ್ದು, ಇದರಿಂದ ನಿಜವಾದ ಹಂದಿಜೋಗೀಸ್ ಜನಾಂಗಕ್ಕೆ ಯಾವುದೇ ಸರ್ಕಾರದ ಸೌಲಭ್ಯಗಳು ಸಿಗದೆ ವಂಚಿತರಾಗುತ್ತಿದ್ದು,ಈಗ ಹಂದಿಜೋಗೀಸ್ ಜನಾಂಗಕ್ಕೆ ಮೀಸಲಿಟ್ಟಿರುವ ಸರ್ಕಾರದ ವಸತಿ ಯೋಜನೆಯಡಿ ಹಕ್ಕು ಪತ್ರಗಳನ್ನು ಹಂದಿಜೋಗೀಸ್ ಅಲ್ಲದವರು ಪಡೆದುಕೊಳ್ಳುತ್ತಿದ್ದು ಇದನ್ನು ಕೂಡಲೇ ತಡೆಗಟ್ಟುವಂತೆ ಹಂದಿಜೋಗೀಸ್ ಸಂಘದ ಜಿಲ್ಲಾಧ್ಯಕ್ಷರಾದ ಮುಕುಂದ, ಕಾರ್ಯದರ್ಶಿ ಚಂದ್ರಶೇಖರ್, ಸಂಚಾಲಕರಾದ ಗೋಪಿ ಮತ್ತು ರಂಗಪ್ಪ ತಿಪಟೂರು ಮನವಿ ಸಲ್ಲಿಸಿದರು.

ಗುಬ್ಬಿ ತಾಲ್ಲೂಕು ಸಾತೇನಹಳ್ಳಿ ಗೇಟ್ (ಸ.ನಂ.49) ಮತ್ತು ತುಮಕೂರಿನ ಅಣ್ಣೇನಹಳ್ಳಿ (ಸ.ನಂ.74) ಬಳಿ ಹಂದೀ ಜೋಗೀಸ್ ಜನಾಂಗಕ್ಕೆ ಗುರುತಿಸಿರುವ ವಸತಿ ಪ್ರದೇಶದಲ್ಲಿ ಇತರೆ ಜಾತಿಯವರಿಗೆ ಹಕ್ಕುಪತ್ರ ನೀಡದಂತೆ ತಡೆ ಹಿಡಿದು, ಹಂದಿಜೋಗೀಸ್ ಜನಾಂಗಕ್ಕೆ ಮಾತ್ರ ಹಕ್ಕುಪತ್ರ ವಿತರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಸಲ್ಲಿಸಲಾಯಿತು.

ಜಿಲ್ಲಾಧಿಕಾರಿ ಶುಭಕಲ್ಯಾಣ್ ಅವರು ಜಿಲ್ಲಾ ಅಲೆಮಾರಿ ಕೋಶದ ಆಧಿಕಾರಿಗಳಾದ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಕೃಷ್ಣಪ್ಪನವರಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ವರದಿ ನೀಡುವಂತೆ ಸೂಚಿಸಿದರು.

# ನಕಲಿ ವೈದ್ಯರ ಹಾವಳಿ ತಪ್ಪಿಸಲು ಡೀಸಿಗೆ ಮನವಿ



ತುಮಕೂರು :ಜಿಲ್ಲೆಯಾದ್ಯಂತ ನಕಲಿ ವೈದ್ಯರುಗಳ ಹಾವಳಿ ಹೆಚ್ಚಾಗಿದ್ದು, ಇದರಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಹಲವು ಸಾವು ನೋವಿಗೆ ಕಾರಣವಾಗುತ್ತಿರುವ ನಕಲಿ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಇಂದು ಮಹಾನಾಯಕ ಡಾ.ಬಿ.ಆರ್.ಅಂಬೇಡ್ಕರ್ ಪ್ರಜಾಸೇನೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮಹಾನಾಯಕ ಡಾ.ಬಿ.ಆರ್. ಅಂಬೇಡ್ಕರ್ ಪ್ರಜಾಸೇನೆ ರಾಜ್ಯಾಧ್ಯಕ್ಷ ಕೆಂಪರಾಜು.ಎ.ಸಿ. ಅವರ ನೇತೃತ್ವದಲ್ಲಿ ಹತ್ತಾರು ಜನರು ಜಿಲ್ಲಾಧಿಕಾರಿಗಳ ಕಚೇರಿ ಬಳಿ ಕೆಲ ಕಾಲ ಪ್ರತಿಭಟನೆ ನಡೆಸಿ, ನಕಲಿ ವೈದ್ಯರ ವಿರುದ್ಧಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ ಮನವಿಯನ್ನು ಸಲ್ಲಿಸಿದರು.

ಈ ವೇಳೆ ಮಾತನಾಡಿದ ಮಹಾನಾಯಕ ಡಾ.ಬಿ.ಆರ್. ಅಂಬೇಡ್ಕರ್ ಪ್ರಜಾಸೇನೆಯ ರಾಜ್ಯಾಧ್ಯಕ್ಷ ಕೆಂಪರಾಜು.ಎ.ಸಿ, ಜಿಲ್ಲೆಯಲ್ಲಿ ನಕಲಿ ವೈದ್ಯರ ಹಾವಳಿ ಹೆಚ್ಚಾಗಿದೆ.ಅದರಲ್ಲಿ ಗಡಿ ಪ್ರದೇಶವಾದ ಪಾವಗಡದಲ್ಲಿ ಗಲ್ಲಿಗೊಂದು ನಕಲಿ ಕ್ಲಿನಿಕ್‌ಗಳಿದ್ದು, ಇತ್ತೀಚಗೆ ನಡೆದ ಮೂವರು ಬಾಣಂತಿಯರ ಸಾವಿಗೆ ನಕಲಿ ವೈದ್ಯರು ನೀಡಿದ ಚಿಕಿತ್ಸೆಯೇ ಕಾರಣ ಎನ್ನಲಾಗುತ್ತಿದೆ.ಈ ಬಗ್ಗೆ ರೋಗಿಗಳ ಸಂಬಂಧಿಕರು ಮತ್ತು ವೈದ್ಯರ ನಡುವಿನ ಸಂಭಾಷಣೆಯ ಆಡಿಯೋ ಮತ್ತು ವಿಡಿಯೋ ಎಲ್ಲೆಡೆ ಹರಿದಾಡುತ್ತಿದೆ ಎಂದರು.

ರೋಗಿಗಳ ಪಾಲಿಗೆ ಕಂಟಕ ಪ್ರಾಯರಾಗಿರುವ ನಕಲಿ ವೈದ್ಯರ ವಿರುದ್ಧ ಜಿಲ್ಲಾಡಳಿತ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ತಜ್ಞರುಗಳೊಂದಿಗೆ ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ದಾಳಿ ನಡೆಸಿ, ಅವರ ಕ್ಲಿನಿಕ್‌ಗಳನ್ನು ಮುಚ್ಚಿಸಬೇಕು. ಇಲ್ಲದಿದ್ದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಕೆಂಪರಾಜು.ಎ.ಸಿ ತಿಳಿಸಿದರು.

ಈ ವೇಳೆ ಸಾಹಿತಿಗಳಾದ ರವಿ ತೊಂಡಗೆರೆ, ರಾಮಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕ್ಷೇತ್ರ ಮಟ್ಟದಲ್ಲಿ ಶಿಕ್ಷಣ ಸುಧಾರಣಾ ಸಮಿತಿ ರಚನೆ : ಮಾ.7ರೊಳಗೆ ವರದಿ ಸಲ್ಲಿಸಲು

ಬೆಂಗಳೂರು : ಎಲ್ಲ ಸರಕಾರಿ ಶಾಲೆಗಳಿಗೆ ಸಂಬಂಧಿಸಿ ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ಶಿಕ್ಷಣ ಸುಧಾರಣಾ ಸಮಿತಿಗಳನ್ನು ರಚಿಸಬೇಕು ಎಂದು ಸರಕಾರ ಆದೇಶಿಸಿದ್ದು, ಮಾ.7ರೊಳಗೆ ವರದಿಯನ್ನು ಸಲ್ಲಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಆದೇಶಿಸಿದೆ.

ಫೆ.21ರಂದು ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ಶಿಕ್ಷಣ ಸುಧಾರಣಾ ಸಮಿತಿಗಳನ್ನು ರಚಿಸಲು ಆದೇಶಿಸಲಾಗಿತ್ತು.

# ಸಮರ್ಪಕ ತ್ರೀಫೇಸ್ ವಿದ್ಯುತ್ ಸರಬರಾಜಿಗೆ ಆಗ್ರಹಿಸಿ ಮನವಿ



ತುಮಕೂರು: ಚೇಳೂರು ಎಂ.ಎಂ.ಎಸ್‌ನಿಂದ ಗುಬ್ಬಿ ತಾಲೂಕು ಬೋರಗೊಂಡನಹಳ್ಳಿ ಮತ್ತು ಮಣ್ಣೆಮಾರಿ ಕಾವಲ್ ಭಾಗದ ರೈತರಿಗೆ ಸಮರ್ಪಕವಾಗಿ ತ್ರಿಪೇಸ್ ವಿದ್ಯುತ್ ನೀಡದೇ ಇರುವುದನ್ನು ಖಂಡಸಿ, ಸಮರ್ಪಕ ವಿದ್ಯುತ್ ಸರಬರಾಜಿಗೆ ಒತ್ತಾಯಿಸಿ ಇಂದು ಭಾರತೀಯ ಕಿಸಾನ್ ಸಂಘದ ವತಿಯಿಂದ ಬೆಸ್ಕಾಂ ಅಧೀಕ್ಷಕ ಇಂಜಿನಿಯರ್ ಮತ್ತು ಇಇ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಭಾರತೀಯ ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ಶ್ರೀಧರ್ ಅವರ ನೇತೃತ್ವದಲ್ಲಿ ಹತ್ತಾರು ರೈತರು, ಭಾರತೀಯ ಕಿಸಾನ್ ಸಂಘದ ಗ್ರಾಮ ಶಾಖೆಯ ಮುಖಂಡರುಗಳು ಬೆಸ್ಕಾಂ ಅಧೀಕ್ಷಕ ಇಂಜಿನಿಯರ್ ಬಿ.ಎಲ್.ನರಸಿಂಹ ಮೂರ್ತಿ ಹಾಗೂ ಕಾರ್ಯಪಾಲಕ ಇಂಜಿನಿಯರ್ ಪ್ರಶಾಂತ ಕೂಡ್ಲಗಿ ಅವರಿಗೆ ಮನವಿ ಸಲ್ಲಿಸಿದರು.

ಚೇಳೂರು ಎಂ.ಎಂ.ಎಸ್‌ಗೆ ಬದಲಾಗಿ, ಸಿ.ನಂದಿಹಳ್ಳಿ ಬಳಿ ಹೊಸದಾಗಿ ಎಂ.ಎಂ.ಎಸ್ ನಿರ್ಮಾಣ ಮಾಡಲಾಗಿದೆ. ವಿದ್ಯುತ್ ಸರಬರಾಜಿಗೆ ಬೇಕಾದ ಎಲ್ಲಾ ರೀತಿಯ ಪರಿಕರಗಳನ್ನು ಒದಗಿಸಿದ್ದರೂ ಅಧಿಕಾರಿಗಳು ಚಾರ್ಜ್ ಮಾಡಿ ವಿದ್ಯುತ್ ಸರಬರಾಜು ಮಾಡಲು ಹಿಂದೇಟು ಹಾಕುತ್ತಿದ್ದಾರೆ.ಚೇಳೂರು ಎಂ.ಎಂ.ಎಸ್‌ನಿಂದ ಬೋರಗೊಂಡನಹಳ್ಳಿ ಮತ್ತು ಎಂ.ಎಂ.ಎ.ಕಾವಲ್‌ಗೆ ಸುಮಾರು 7 ಕಿ.ಮಿ.ಗಳಾಗುತ್ತವೆ. ಅದೇ ಸಿ.ನಂದಿಹಳ್ಳಿಯಿಂದ ಕೇವಲ ಎರಡು ಕಿ.ಮಿ. ಆಗಲಿದೆ.ಸಿ.ನಂದಿಹಳ್ಳಿ ಎಂ.ಎಂ.ಎಸ್ ಚಾರ್ಜ್ ಮಾಡುವುದರಿಂದ ಈ ಭಾಗದ ರೈತರಿಗೆ ಹೆಚ್ಚಿನ ಅನುಕೂಲವಾಗಲಿದೆ. ಹಾಗಾಗಿ ಬೆಸ್ಕಾಂ ಅಧಿಕಾರಿಗಳು ಶೀಘ್ರವೇ ಸಿ.ನಂದಿಹಳ್ಳಿ ಎಂ.ಎಂ.ಎಸ್ ಚಾರ್ಜ್ ಮಾಡಲು ಗಮನಹರಿಸಬೇಕೆಂಬುದು ಭಾರತೀಯ ಕಿಸಾನ್ ಸಂಘದ ಒತ್ತಾಯವಾಗಿದೆ ಎಂದರು.

ಈ ವೇಳೆ ಇರಕಸಂದ್ರ ಗ್ರಾ.ಪಂ.ಸದಸ್ಯರಾದ ಜಯಣ್ಣ, ಭಾರತೀಯ ಕಿಸಾನ್ ಸಂಘದ ಗ್ರಾಮಸಮಿತಿ ಸದಸ್ಯರಾದ ಶೇಖರಪ್ಪ, ಪ್ರೇಮಕುಮಾರ್, ಮಂಜುನಾಥ್, ರೇಣುಕಾಸ್ವಾಮಿ, ಆನಂದಪ್ಪ.ಬಿ.ಎಸ್, ಪರಮೇಶ್.ಬಿ.ಜೆ., ನಿವೃತ್ತ ಶಿಕ್ಷಕರಾದ ಲಕ್ಷ್ಮಯ್ಯ, ಶಿವರುದ್ರಯ್ಯ, ಮುಖಂಡರಾದ ರೇಣುಕಪ್ಪ, ಚಂದ್ರಯ್ಯಮಹದೇವಯ್ಯ, ರಮೇಶ್ ಮತ್ತಿತರರು ಉಪಸ್ಥಿತರಿದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper